# ಕರ್ನಾಟಕವಿಧಾನಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 157(187)
2. ಸದಸ್ಯರ ಹೆಸರು : ಶ್ರೀ ಎನ್.ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 18.08.2026
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಯಚೂರು ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಪ್ರಸ್ತುತ ಯಾವ ಹಂತದಲ್ಲಿದೆ. | ರಾಯಚೂರು ವಿಮಾನ ನಿಲ್ದಾಣದ ಅಭಿವೃದ್ಧಿ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಯ ಮೂಲಕ ರೂ.219.00 ಕೋಟಿ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದೆ. ವಿಮಾನ ನಿಲ್ದಾಣದ ಕಾಮಗಾರಿ ಪ್ರಾರಂಭಿಸುವ ಮೊದಲು ನಾಗರಿಕ ವಿಮಾನಯಾನ ಸಚಿವಾಲಯದಿಂದ (MoCA) Site Clearance ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ (MoEF&CC) Environmental Clearance (EC) ಪಡೆದಿದ್ದು, ಕಾಮಗಾರಿಗಳನ್ನು ಫೆಬ್ರವರಿ-2025 ರಿಂದ ಕೈಗೊಳ್ಳಲಾಗಿದ್ದು, .ವಿಮಾನ ನಿಲ್ದಾಣದ ಭೂ-ಸ್ವಾಧೀನ ಮತ್ತು ಕಾಮಗಾರಿಗಾಗಿ ರೂ.106.00 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.<br><br>ಪ್ರಸ್ತುತ, ರಾಯಚೂರು ವಿಮಾನ ನಿಲ್ದಾಣದ ಕಾಮಗಾರಿಯ ಭೌತಿಕ ಪ್ರಗತಿಯು ಜುಲೈ-2026ರ ಅಂತ್ಯಕ್ಕೆ ಶೇ.45 ರಷ್ಟಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ. |
| (ಆ) | ಸದರಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯಲ್ಲಿ ಎದುರಿಸುತ್ತಿರುವ ಸಮಸ್ಯೆಗಳೇನು. | ರಾಯಚೂರು ವಿಮಾನ ನಿಲ್ದಾಣ ಯೋಜನೆಗೆ ಸಂಬಂಧಿಸಿದ Site Clearance ಅನ್ನು MoCA ಯಿಂದ ತಾತ್ವಿಕ ಅನುಮೋದನೆಯನ್ನು 22.10.2024 ರಂದು ಪಡೆಯಲಾಗಿದೆ. ಅಲ್ಲದೆ, ವಿಮಾನ ನಿಲ್ದಾಣಕ್ಕೆ ಅಗತ್ಯವಿರುವ MoCA ಯ In-Principle Approval ಪಡೆಯಲು 02.01.2026 ರಂದು ಅರ್ಜಿ ಸಲ್ಲಿಸಲಾಗಿದ್ದು, ಈ ಸಂಬಂಧ Steering Committee ಸಭೆಯನ್ನು ಆಯೋಜಿಸುವಂತೆ ದಿನಾಂಕ 07.02.2026, 22.05.2026 ಹಾಗೂ 30.06.2026ರಂದು ಕೋರಿದೆ. MoCAಯಿಂದ In-Principle Approval ಪಡೆಯಲು ಕ್ರಮವಹಿಸಿದೆ.<br><br>ರಾಯಚೂರು ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಭೂಸ್ವಾಧೀನ ಮಾಡಲಾಗುತ್ತಿರುವ ಯರಮರಸ್ ಮತ್ತು ಏಗನೂರು ಗ್ರಾಮಗಳಲ್ಲಿರುವ ಒಟ್ಟು 138 ಕಟ್ಟಡಗಳ ಪೈಕಿ 22 ಕಟ್ಟಡಗಳ ಮಾಲೀಕರು ನ್ಯಾಯಾಲಯದಲ್ಲಿ ದಾವೆ ಹೂಡಿರುತ್ತಾರೆ. ವಿಮಾನ ನಿಲ್ದಾಣದ R&R ಗೆ ಸಂಬಂಧಿಸಿದಂತೆ 116 ಕಟ್ಟಡಗಳ ಮಾಲೀಕರು ಪರಿಹಾರ ಮೊತ್ತವನ್ನು ಪಡೆದುಕೊಂಡಿದ್ದು, ಜಿಲ್ಲಾಡಳಿತವು ಅಭಿವೃದ್ಧಿಪಡಿಸಿರುವ ವಸತಿ ನಿವೇಶನಗಳಲ್ಲಿ ಮೂಲಸೌಕರ್ಯಗಳ ಕೊರತೆಯಿರುವುದರಿಂದ ಸ್ಥಳಾಂತರಗೊಳ್ಳಲು ಅಡಚಣೆ ಉಂಟಾಗುತ್ತಿದೆ. |

| | | |
|---|---|---|
| (ಇ) | ಸದರಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ನಿಗದಿಪಡಿಸುವ ಅವಧಿ ಎಷ್ಟು ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ವಿಮಾನ ನಿಲ್ದಾಣದ ಕಾಮಗಾರಿಯನ್ನು ಪೂರ್ಣಗೊಳಿಸಲು 24 ತಿಂಗಳ ಕಾಲಾವಧಿಯನ್ನು ನಿಗದಿಪಡಿಸಲಾಗಿದ್ದು, ಕಾಮಗಾರಿ ಪ್ರಾರಂಭಿಸುವ ಮೊದಲು ಅಗತ್ಯವಿರುವ MoCA ಯಿಂದ Site Clearance ಹಾಗೂ MoEF&CC ಯ Environmental Clearance (EC) ಅನ್ನು ಪಡೆದುಕೊಂಡ ನಂತರ ಫೆಬ್ರುವರಿ 2025 ರಿಂದ ವಿಮಾನ ನಿಲ್ದಾಣದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ.<br><br>ಕಾಮಗಾರಿಯ ಅನುಷ್ಠಾನಕ್ಕಾಗಿ ಅಗತ್ಯವಿರುವ PMC (Project Management Consultant) ಹಾಗೂ ವಿನ್ಯಾಸ ಸಮಾಲೋಚಕರನ್ನು ನೇಮಿಸಲಾಗಿದ್ದು, ವಿಮಾನ ನಿಲ್ದಾಣದ ಕಾಮಗಾರಿಗಳು ಪ್ರಗತಿಯಲ್ಲಿವೆ. |

ಸಂಖ್ಯೆ:ಮೂಅಇ 203 ರಾಅವಿ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು